# ಸರ್ಕಾರಿ ಪ್ರೌಢಶಾಲೆ ಮುರುಂಡಿ, ಅರಸೀಕೆರೆ ತಾಲ್ಲೂಕು ಹಾಸನ ಜಿಲ್ಲೆ

## ಸಂಕಲನಾತ್ಮಕ ಮೌಲ್ಯಮಾಪನ-1, 2022-23

**ತರಗತಿ : 8** **ವಿಷಯ : ವಿಜ್ಞಾನ** **ಅಂಕಗಳು : 30** **ಸಮಯ : 1ಗಂಟೆ**

---

**I.ಕೆಳಗಿನ ಪ್ರತಿಯೊಂದು ಹೇಳಿಕೆಗೆ ನಾಲ್ಕು ಆಯ್ಕೆಗಳನ್ನು ಕೊಡಲಾಗಿದೆ. ಅವುಗಳಲ್ಲಿ ಸರಿಯಾದುದನ್ನು ಆರಿಸಿ ಕ್ರಮಾಕ್ಷರಗಳೊಂದಿಗೆ ಬರೆಯಿರಿ.** **4x1 =4**

1. ಬ್ರೆಡ್ ಅಥವಾ ಇಡ್ಲಿಹಿಟ್ಟು ಉಬ್ಬುವುದು ಈ ಕಾರಣದಿಂದ, ______

(A) ಶಾಖ (B) ರುಬ್ಬುವಿಕೆ **(C) ಯೀಸ್ಟ್ ಕೋಶಗಳ ಬೆಳವಣಿಗೆ** (D) ಮಾಗುವಿಕೆ

2. ಲೋಹಗಳು ಆಮ್ಲಗಳೊಂದಿಗೆ ವರ್ತಿಸಿ ಬಿಡುಗಡೆ ಮಾಡುವ ಅನಿಲ --------

(A) ಆಕ್ಸಿಜನ್ **(B) ಹೈಡ್ರೋಜನ್** (C) ಇಂಗಾಲದ ಡೈ ಆಕ್ಸೈಡ್ (D) ನೈಟ್ರೋಜನ್

3. ವಲಸೆ ಹಕ್ಕಿಗಳು ದೂರದ ಸ್ಥಳಗಳಿಗೆ ಹಾರಿಹೋಗಲು ________ ಬದಲಾವಣೆಗಳು ಕಾರಣ.

(A) ಪರಿಸರ (B) ಅಪಾಯಕಾರಿ (C) ನೈಸರ್ಗಿಕ **(D) ಹವಮಾನ**

4. ಈ ಕೆಳಗಿನ ಧ್ವನಿಗಳಲ್ಲಿ ಯಾರ ಧ್ವನಿ ಕನಿಷ್ಟ ಆವೃತ್ತಿ ಹೊಂದಿದೆ?

(A) ಹೆಣ್ಣು ಮಗು (B) ಗಂಡು ಮಗು (C) ಪುರುಷ **(D) ಮಹಿಳೆ**

**II.ಕೆಳಗಿನ ಪ್ರಶ್ನೆಗಳಿಗೆ ಒಂದು ಶಬ್ದ ಅಥವಾ ವಾಕ್ಯದಲ್ಲಿ ಉತ್ತರಿಸಿ.** **3x1 =3**

5. ಕೋಕ್‌ನ ಉಪಯೋಗಗಳನ್ನು ಬರೆಯಿರಿ.
ಉತ್ತರ:- **ಉಕ್ಕಿನ ಉತ್ಪಾದನೆ ಮತ್ತು ಅನೇಕ ಲೋಹಗಳ ಉದ್ಧರಣೆಯಲ್ಲಿ ಕೋಕ್ ಅನ್ನು ಉಪಯೋಗಿಸುತ್ತಾರೆ.**

6. ರಸ್ತೆಗಳ ಮೇಲ್ಮೈ ನಿರ್ಮಾಣದಲ್ಲಿ ಉಪಯೋಗಿಸುವ ಪೆಟ್ರೋಲಿಯಂ ಉತ್ಪನ್ನವನ್ನು ಹೆಸರಿಸಿ.
ಉತ್ತರ:- **ಕಲ್ಲಿದ್ದಲು ಡಾಂಬರು**

7. ಒತ್ತಡ ಎಂದರೇನು?
ಉತ್ತರ:- **ಏಕಮಾನ ವಿಸ್ತೀರ್ಣದಲ್ಲಿನ ಬಲವೇ ಒತ್ತಡ.**

**III.ಕೆಳಗಿನ ಪ್ರಶ್ನೆಗಳಿಗೆ ಎರಡು ವಾಕ್ಯಗಳಲ್ಲಿ ಉತ್ತರಿಸಿ.** **4x2 = 8**

8. ಧ್ವನಿಪೆಟ್ಟಿಗೆಯ ಚಿತ್ರ ಬರೆಯಿರಿ.
ಉತ್ತರ:-



9. ಸೂಕ್ಷ್ಮಜೀವಿಗಳ ಪ್ರಮುಖ ಗುಂಪುಗಳನ್ನು ಹೆಸರಿಸಿ?
ಉತ್ತರ:- **ಸೂಕ್ಷ್ಮಜೀವಿಗಳನ್ನು ನಾಲ್ಕು ಪ್ರಮುಖ ಗುಂಪುಗಳಾಗಿ ವರ್ಗೀಕರಿಸಲಾಗಿದೆ. ಈ ಗುಂಪುಗಳೆಂದರೆ, ಬ್ಯಾಕ್ಟೀರಿಯಾ, ಶಿಲೀಂಧ್ರ, ಪ್ರೋಟೋಜೋವಾ ಮತ್ತು ಕೆಲವು ಶೈವಲಗಳು.**

10. ಆಟಗಾರರು ಸ್ಪೈಕ್ ಇರುವ ಬೂಟುಗಳನ್ನು ಏಕೆ ಧರಿಸುತ್ತಾರೆ ಎಂದು ವಿವರಿಸಿ.
ಉತ್ತರ:- **ಆಟಗಾರರು ಸ್ಪೈಕ್ ಇರುವ ಬೂಟುಗಳನ್ನು ಏಕೆ ಧರಿಸುತ್ತಾರೆ ಏಕೆಂದರೆ ಸ್ಪೈಕ್‌ಗಳು ನೆಲ ಮತ್ತು ಬೂಟಗಳ ನಡುವಿನ ಘರ್ಷಣೆಯನ್ನು ಹೆಚ್ಚಿಸುವುದರ ಮೂಲಕ ಓಡುವಾಗ ಹೆಚ್ಚಿನ ಹಿಡಿತವನ್ನು ಸಾಧಿಸಬಹುದು.**

11. ಬಲದ ವಿವಿಧ ವಿಧಗಳಾವುವು?
ಉತ್ತರ:- **ಬಲದ ವಿವಿಧ ವಿಧಗಳು-ಸ್ನಾಯು, ಸಂಪರ್ಕ, ಸಂಪರ್ಕರಹಿತ, ಗುರುತ್ವಾಕರ್ಷಣೆ, ಘರ್ಷಣೆ, ಆಕಾರ, ಆಕರ್ಷಣೆ.**

**IV.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **2x3 =6**

12. ಅರಣ್ಯನಾಶಕ್ಕೆ ಕಾರಣಗಳು ಮತ್ತು ಪರಿಣಾಮಗಳನ್ನು ಬರೆಯಿರಿ.

ಉತ್ತರ:–

**ಅರಣ್ಯ ನಾಶಕ್ಕೆ ಕಾರಣಗಳು:– ಈ ಕೆಳಗಿನ ಕೆಲವು ಉದ್ದೇಶಗಳಿಗಾಗಿ ಅರಣ್ಯದಲ್ಲಿರುವ ಮರಗಳನ್ನು ಕಡಿಯಲ್ಲಾಗುತ್ತದೆ.**

- **ವ್ಯವಸಾಯ ಭೂಮಿಯನ್ನಾಗಿ ಪರಿವರ್ತಿಸಲು**
- **ಮನೆಗಳನ್ನು ಮತ್ತು ಕಾರ್ಖಾನೆಗಳನ್ನು ಕಟ್ಟಲು**
- **ಪೀಠೋಪಕರಣಗಳನ್ನು ತಯಾರಿಸಲು ಅಥವಾ ಉರುವಲಾಗಿ ಉಪಯೋಗಿಸಲು**

**ಅರಣ್ಯನಾಶದ ಪರಿಣಾಮಗಳು:–**

- **ಅರಣ್ಯನಾಶದಿಂದಾಗಿ ವಾತಾವರಣದಲ್ಲಿನ ಕಾರ್ಬನ್ ಡೈಆಕ್ಸೈಡ್‌ನ ಪ್ರಮಾಣ ಹೆಚ್ಚುತ್ತದೆ.**
- **ಅಂತರ್ಜಲದ ಮಟ್ಟ ಕುಸಿಯುತ್ತದೆ.**
- **ಅರಣ್ಯನಾಶವು ಪರಿಸರದ ಸಮತೋಲನವನ್ನು ಹಾಳುಮಾಡುತ್ತದೆ**
- **ಮರಗಳ ಸಂಖ್ಯೆ ಕಡಿಮೆಯಾದರೆ ಮಣ್ಣಿನ ಸವಕಳಿ ಹೆಚ್ಚುತ್ತದೆ.**
- **ಪ್ರವಾಹಗಳು ಮತ್ತು ಬರಗಾಲದ ಪರಿಸ್ಥಿತಿ ಉಂಟಾಗುತ್ತವೆ.**

**13.** ಸಂಶ್ಲೇಷಿತ ಎಳೆಗಳನ್ನು ಉತ್ಪಾದಿಸುವುದು ನಿಜವಾಗಿಯೂ ಕಾಡುಗಳ ಸಂರಕ್ಷಣೆಗೆ ನೆರವಾಗುತ್ತದೆ.ವಿವರಿಸಿ

ಉತ್ತರ:– **ನೈಸರ್ಗಿಕ ಎಳೆಗಳ ಕಚ್ಚಾವಸ್ತುಗಳು ನೈಸರ್ಗಿಕವಾಗಿ ಪ್ರಮುಖವಾಗಿ ಗಿಡಮರಗಳಿಂದ ದೊರೆಯುತ್ತವೆ.ಇದರರ್ಥ ಅಪಾರ ಗಿಡಮರಗಳ ನಾಶ.ಇದು ಅರಣ್ಯನಾಶಕ್ಕೆ ಕಾರಣವಾಗುತ್ತದೆ.ಆದರೆ ಸಂಶ್ಲೇಷಿತ ಎಳೆಗಳ ಕಚ್ಚಾವಸ್ತುಗಳು ಪ್ರಮುಖವಾಗಿ ಪೆಟ್ರೋ ರಾಸಾಯನಿಕಗಳಾಗಿವೆ. ಆದ್ದರಿಂದ ಸಂಶ್ಲೇಷಿತ ಎಳೆಗಳನ್ನು ಉತ್ಪಾದಿಸುವುದು ನಿಜವಾಗಿಯೂ ಕಾಡುಗಳ ಸಂರಕ್ಷಣೆಗೆ ನೆರವಾಗುತ್ತದೆ.**

**V.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **1x4 = 4**

14. ಈ ಕೆಳಗಿನ ಸಂದರ್ಭಗಳಲ್ಲಿ ಏನಾಗುತ್ತದೆ?

a. ತಾಮ್ರದ ಫಲಕದ ಮೇಲೆ ಸಾರರಿಕ್ತ ಸಲ್ಫ್ಯೂರಿಕ್ ಆಮ್ಲ ಸುರಿದಾಗ.

ಉತ್ತರ:– **ತಾಮ್ರದ ಸಲ್ಫೇಟ್‌ನ ನೀಲಿ ಬಣ್ಣದ ಹರಳುಗಳು, ಉಂಟಾಗುವುದರ ಜೊತೆಗೆ, ಹೈಡ್ರೋಜನ್ ಅನಿಲ ಸಹ ಬಿಡುಗಡೆಯಾಗುತ್ತದೆ.**

**ತಾಮ್ರ + ಸಲ್ಫ್ಯೂರಿಕ್ ಆಮ್ಲ –> ತಾಮ್ರದ ಸಲ್ಫೇಟ್ + ಹೈಡ್ರೋಜನ್**

b. ಕಬ್ಬಿಣದ ಮೊಳೆಗಳನ್ನು ತಾಮ್ರದ ಸಲ್ಫೇಟ್ ದ್ರಾವಣದಲ್ಲಿ ಇಟ್ಟಾಗ. ಈ ಮೇಲಿನ ಕ್ರಿಯೆಗಳ ಪದ ಸಮೀಕರಣ ಬರೆಯಿರಿ.

ಉತ್ತರ:– **ಕಬ್ಬಿಣವು ಹೆಚ್ಚು ಕ್ರಿಯಾಶಿಲವಾಗಿದ್ದು, ತಾಮ್ರದ ಸಲ್ಫೇಟ್ ದ್ರಾವಣದಿಂದ ತಾಮ್ರವನ್ನು ಸ್ಥಾನಪಲ್ಲಟಗೊಳಿಸುತ್ತದೆ.ತಾಮ್ರವು ಮೊಳೆಯ ಮೇಲೆ ಸಂಗ್ರಹವಾಗುತ್ತದೆ. ಮತ್ತು ತಾಮ್ರದ ಸಲ್ಫೇಟ್ ದ್ರಾವಣದ ನೀಲಿ ಬಣ್ಣ ಕ್ಷೀಣಿಸುತ್ತದೆ.**

**VI.ಕೆಳಗಿನ ಪ್ರಶ್ನೆಗಳಿಗೆ ಉತ್ತರಿಸಿ.** **1x5 = 5**

15.(a) ಕೃಷಿಯ ಹಂತಗಳನ್ನು ಪಟ್ಟಿಮಾಡಿ. ನೀರನ್ನು ಉಳಿತಾಯ ಮಾಡುವ ನೀರಾವರಿಯ ಎರಡು ವಿಧಾನಗಳನ್ನು ವಿವರಿಸಿ.

(b) ರಸಗೊಬ್ಬರಗಳು ಸಾವಯವ ಗೊಬ್ಬರಕ್ಕಿಂತ ಹೇಗೆ ಭಿನ್ನವಾಗಿವೆ ಪಟ್ಟಿಮಾಡಿ.

ಉತ್ತರ:–

**(a) ಕೃಷಿಯ ಹಂತಗಳು**

**(1) ಮಣ್ಣನ್ನು ಹದಗೊಳಿಸುವಿಕೆ (2) ಬಿತ್ತನೆ (3) ಸಾವಯವ ಗೊಬ್ಬರಗಳು ಮತ್ತು ರಸಗೊಬ್ಬರಗಳನ್ನು ಸೇರಿಸುವುದು (4) ನೀರಾವರಿ (5) ಕಳೆಗಳಿಂದ ರಕ್ಷಣೆ (6) ಕೊಯ್ಲು (7) ಸಂಗ್ರಹಣೆ**

**ನೀರನ್ನು ಉಳಿತಾಯ ಮಾಡುವ ನೀರಾವರಿಯ ಎರಡು ವಿಧಾನಗಳು**

**1)ತುಂತು ನೀರಾವರಿ ವಿಧಾನ ಮತ್ತು 2) ಹನಿ ನೀರಾವರಿ ವಿಧಾನ**

(b)

| ಕ್ರ.ಸಂ | ರಸಗೊಬ್ಬರ | ಸಾವಯವಗೊಬ್ಬರ |
|---|---|---|
| 1 | ರಸಗೊಬ್ಬರವು ಮಾನವ ನಿರ್ಮಿತ ನಿರವಯವ ಲವಣ. | ಸಾವಯವ ಗೊಬ್ಬರವು ಒಂದು ನೈಸರ್ಗಿಕ ಪದಾರ್ಥವಾಗಿದ್ದು,ಅದನ್ನುಸಗಣಿಮತ್ತುಸಸ್ಯಗಳ ಉಳಿಕೆಗಳ ವಿಘಟನೆಯಿಂದ ಪಡೆಯಲಾಗುತ್ತದೆ. |
| 2 | ರಸಗೊಬ್ಬರಗಳನ್ನು ಕಾರ್ಖಾನೆಗಳಲ್ಲಿ ಉತ್ಪಾದಿಸುತ್ತಾರೆ. | ಸಾವಯವ ಗೊಬ್ಬರಗಳನ್ನು ಬಯಲುಗಳಲ್ಲಿ ಉತ್ಪಾದಿಸಬಹುದು. |
| 3 | ರಸಗೊಬ್ಬರಗಳು ಯಾವುದೇ ರೀತಿಯ ಹ್ಯೂಮಸ್ ಅನ್ನು ಮಣ್ಣಿಗೆ ಒದಗಿಸುವುದಿಲ್ಲ | ಸಾವಯವ ಗೊಬ್ಬರವು ಸಾಕಷ್ಟು ಹ್ಯೂಮಸ್ ಅನ್ನು ಮಣ್ಣಿಗೆ ಒದಗಿಸುತ್ತದೆ. |
| 4 | ರಸಗೊಬ್ಬರಗಳು ನೈಟ್ರೋಜನ್,ಫಾಸ್ಫರಸ್ ಮತ್ತು ಪೊಟ್ಯಾಸಿಯಂಗಳಂತಹ ಸಸ್ಯಪೋಷಕಗಳಿಂದ ಸಮೃದ್ಧವಾಗಿವೆ. | ಸಾಪೇಕ್ಷವಾಗಿ ಸಾವಯವ ಗೊಬ್ಬರವು ಸಸ್ಯಪೋಷಕಗಳನ್ನು ಕಡಿಮೆ ಪ್ರಮಾಣದಲ್ಲಿ ಹೊಂದಿವೆ. |

ಇಂದ

**ಅಂಜನಪ್ಪ ಕೆ ಆರ್**

**ವಿಜ್ಞಾನ ಸಹಶಿಕ್ಷಕರು**

**ಸ.ಪ್ರೌ.ಶಾಲೆ ಮುರುಂಡಿ ಅರಸೀಕೆರೆ ತಾಲ್ಲೂಕು**

**ಹಾಸನ ಜಿಲ್ಲೆ**